ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ ...

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ

ದಿನಾಂಕ : DATE : 19/2/2020

# ಲಾ ಸ್ಕೂಲ್‌ನಲ್ಲಿ ಕನ್ನಡಿಗರಿಗೆ 25% ಮೀಸಲು

## ವಿಧಾನಸಭೆಯಲ್ಲಿ ತಿದ್ದುಪಡಿ ವಿಧೇಯಕ ಮಂಡನೆ | ಹಿಂದೆ ಶೇ.50 ಮೀಸಲು ತಿರಸ್ಕರಿಸಿದ್ದ ಗೌರ್ನರ್

• **ಕನ್ನಡಪ್ರಭ ವಾರ್ತೆ** ವಿಧಾನಸಭೆ

ಬೆಂಗಳೂರಿನ ರಾಷ್ಟ್ರೀಯ ಕಾನೂನು ವಿದ್ಯಾಲಯದಲ್ಲಿ ರಾಜ್ಯದ ವಿದ್ಯಾರ್ಥಿಗಳಿಗೆ ಶೇ.25ರಷ್ಟು ಸೀಟು ಮೀಸಲು ನೀಡಲು ಅವಕಾಶ ಕಲ್ಪಿಸುವ ಭಾರತ ರಾಷ್ಟ್ರೀಯ ಕಾನೂನು ವಿದ್ಯಾಲಯ (ತಿದ್ದುಪಡಿ) ವಿಧೇಯಕ-2020 ಮಂಗಳವಾರ ವಿಧಾನಸಭೆಯಲ್ಲಿ ಮಂಡನೆಯಾಯಿತು.

ಮಧ್ಯಪ್ರದೇಶ, ಪಂಜಾಬ್, ತೆಲಂಗಾಣ ಸೇರಿದಂತೆ ವಿವಿಧ ರಾಜ್ಯಗಳ ರಾಷ್ಟ್ರೀಯ ಕಾನೂನು ವಿದ್ಯಾಲಯಗಳಲ್ಲಿ ಆಯಾ ರಾಜ್ಯದ ವಿದ್ಯಾರ್ಥಿಗಳಿಗೆ ಈಗಾಗಲೇ ಮೀಸಲಾತಿ ಕಲ್ಪಿಸಲಾಗಿದೆ. ಅದೇ ಮಾದರಿಯಲ್ಲಿ ಕರ್ನಾಟಕದಲ್ಲೂ ರಾಷ್ಟ್ರೀಯ ಕಾನೂನು ವಿದ್ಯಾಲಯದಲ್ಲಿ ರಾಜ್ಯ ವಿದ್ಯಾರ್ಥಿಗಳಿಗೆ ಮೀಸಲಾತಿ ಕಲ್ಪಿಸಬೇಕೆಂಬ ಬೇಡಿಕೆ ಬೇಡಿಕೆ ಹಲವು ಕಾಲದಿಂದ ಇತ್ತು. ಆ ನಿಟ್ಟಿನಲ್ಲಿ ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಾತಿ ಕಲ್ಪಿಸಲು ಸರ್ಕಾರ ವಿಧೇಯಕ ಮಂಡಿಸಿದೆ. ಈ ವಿಧೇಯಕವನ್ನು ಹಾಲಿ ಅಧಿವೇಶನದಲ್ಲಿ ಚರ್ಚೆಗೆ ತೆಗೆದುಕೊಳ್ಳುವುದಿಲ್ಲ. ಮುಂದಿನ ಬಜೆಟ್ ಅಧಿವೇಶನದಲ್ಲಿ ಚರ್ಚೆಗೆ ತೆಗೆದುಕೊಳ್ಳಲಾಗುವುದು ಎಂದು ಸ್ಪೀಕರ್ ಸಭೆಗೆ ತಿಳಿಸಿದರು.



ವಿಧಾನಸಭೆ ಅಧಿವೇಶನಕ್ಕೆ ಮುಖ್ಯಮಂತ್ರಿ ಯಡಿಯೂರಪ್ಪ ಆಗಮಿಸಿದರು

ಈ ವಿಧೇಯಕಕ್ಕೆ ಅಂಗೀಕಾರ ದೊರೆತರೆ ಬೆಂಗಳೂರಿನ ನಾಗರಬಾವಿ ಬಳಿಯ ರಾಷ್ಟ್ರೀಯ ಕಾನೂನು ವಿದ್ಯಾಲಯದಲ್ಲಿನ ಒಟ್ಟಾರೆ ಪದವಿ ಕೋರ್ಸುಗಳಲ್ಲಿ ಶೇ.25 ಸೀಟುಗಳು ಕರ್ನಾಟಕ ವಿದ್ಯಾರ್ಥಿಗಳಿಗೆ ಮೀಸಲು ದೊರೆಯಲಿದೆ.

**ಯಾರು ಕರ್ನಾಟಕ ವಿದ್ಯಾರ್ಥಿಗಳು?:** ರಾಜ್ಯದಲ್ಲಿ ಕನಿಷ್ಠ ಹತ್ತು ವರ್ಷ ವಿದ್ಯಾಭ್ಯಾಸ ಮಾಡಿರುವ ವಿದ್ಯಾರ್ಥಿಗಳು ಕರ್ನಾಟಕದವರು ಎಂದು ಪರಿಗಣಿಸಲಾಗುತ್ತದೆ. ಹಿಂದಿನ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ರಾಷ್ಟ್ರೀಯ ಕಾನೂನು ವಿದ್ಯಾಲಯದಲ್ಲಿ ಶೇ.50ರಷ್ಟು ಸೀಟುಗಳನ್ನು ರಾಜ್ಯದ ವಿದ್ಯಾರ್ಥಿಗಳಿಗೆ ಮೀಸಲಿಡಬೇಕೆಂದು ತರಲಾಗಿದ್ದ ವಿಧೇಯಕವನ್ನು ರಾಜ್ಯಪಾಲರು ತಿರಸ್ಕರಿಸಿದ್ದರು. ಇದೀಗ ಬಿಜೆಪಿ ಸರ್ಕಾರ ಶೇ.25ರಷ್ಟು ಮೀಸಲಾತಿಗೆ ವಿಧೇಯಕ ಮಂಡಿಸಿದೆ. ರಾಷ್ಟ್ರೀಯ ಕಾನೂನು ವಿದ್ಯಾಲಯಗಳಲ್ಲಿ ಸ್ಥಳೀಯ ವಿದ್ಯಾರ್ಥಿಗಳ ಮೀಸಲಾತಿಗೆ ಸಂಬಂಧಿಸಿದಂತೆ ಗುಜರಾತ್‌ನ ಯತಿನ್ ಕುಮಾರ್ ಜಸುಭಾಯ್ ಪಟೇಲ್ ವಿ. ಅವರ ರಿಟ್ ಅರ್ಜಿ ಪ್ರಕರಣದಲ್ಲಿ ಸುಪ್ರೀಂಕೋರ್ಟ್ ನೀಡಿರುವ ತೀರ್ಪನ್ನು ಆಧರಿಸಿ ಈ ವಿಧೇಯಕ ಮಂಡಿಸಲಾಗಿದೆ.

3